# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 404
2. ಸದಸ್ಯರ ಹೆಸರು : ಡಾ|| ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 07.12.2023
4. ಉತ್ತರಿಸಬೇಕಾದ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಮೇಕೆದಾಟು ಯೋಜನೆ ಕಳೆದ ಹತ್ತಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| (ಆ) | ಈ ಯೋಜನೆಗಳಿಂದ ಯಾವ ಯಾವ ಜಿಲ್ಲೆಗಳಿಗೆ ಕುಡಿಯುವ ನೀರಿಗೆ ಹಾಗೂ ರೈತರಿಗೆ ವ್ಯವಸಾಯಕ್ಕೆ ದೊರೆಯಬಹುದಾದ ನೀರಿನ ಪ್ರಮಾಣವೆಷ್ಟು; | ಇದು ಕೇವಲ ಕುಡಿಯುವ ಉದ್ದೇಶಕ್ಕಾಗಿ ಹಾಗೂ ಜಲ ವಿದ್ಯುತ್ ಉತ್ಪಾದನೆಗೆ ನೀರನ್ನು ಬಳಸುವ ಯೋಜನೆಯಾಗಿದೆ. ಕಾವೇರಿ ನ್ಯಾಯಾಧೀಕರಣದ ಅಂತಿಮ ತೀರ್ಪು ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಬೆಂಗಳೂರು ನಗರಕ್ಕೆ ಕುಡಿಯುವ ನೀರಿಗಾಗಿ 4.75 ಟಿ.ಎಂ.ಸಿ. ನೀರನ್ನು ಹಂಚಿಕೆ ಮಾಡಿದ್ದು, ಮೇಕೆದಾಟು ಯೋಜನೆಯಿಂದ ಈ ನೀರನ್ನು ಒದಗಿಸಬಹುದಾಗಿರುತ್ತದೆ. |
| (ಇ) | ಮುಳುಗಡೆಯಾಗಲಿರುವ ಅರಣ್ಯ ಮತ್ತು ಕೃಷಿ ಜಮೀನಿನ ವ್ಯಾಪ್ತಿ ಎಷ್ಟು; ಯಾವ ಕಾಲಮಿತಿಯೊಳಗೆ ಈ ಯೋಜನೆಯನ್ನು ಪೂರ್ಣಗೊಳಿಸಲಾಗುವುದು? | ಮೇಕೆದಾಟು ಯೋಜನೆಗೆ ಮುಳುಗಡೆಯಾಗಲಿರುವ ಪ್ರದೇಶವು 5167.08 ಹೆಕ್ಟೇರ್‌ಗಳಾಗಿದ್ದು, 5006.27 ಹೆಕ್ಟೇರ್ ಅರಣ್ಯ ಪ್ರದೇಶ ಹಾಗೂ ಉಳಿಕೆ 160.81 ಹೆಕ್ಟೇರ್ ಕಂದಾಯ ಪ್ರದೇಶವಾಗಿರುತ್ತದೆ.<br>ವಿವರವಾದ ಯೋಜನಾ ವರದಿಯನ್ನು ದಿನಾಂಕ:18.01.2019ರಂದು ಕೇಂದ್ರ ಜಲ ಆಯೋಗಕ್ಕೆ ಸಲ್ಲಿಸಿದ್ದು, ಅನುಮೋದನೆ ನಿರೀಕ್ಷಿಸಲಾಗಿದೆ. ಕೇಂದ್ರ ಸರ್ಕಾರದಿಂದ ಯೋಜನೆಗೆ ಅವಶ್ಯವಿರುವ ಶಾಸನಬದ್ಧ ಅನುಮತಿ ದೊರಕಿದ ನಂತರ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು. |

***ಸಂಖ್ಯೆ: ಜಸಂಇ 72 ಎನ್‌ಎಲ್‌ಎ 2023***

**( ಡಿ. ಕೆ. ಶಿವಕುಮಾರ್ )**
**ಉಪ ಮುಖ್ಯಮಂತ್ರಿಗಳು**